ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1382
ಉತ್ತರಿಸಬೇಕಾದ ದಿನಾಂಕ : 24.12.2021
ಸದಸ್ಯರ ಹೆಸರು : ಶ್ರೀ ಶಶಿಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ಸಚಿವರು : ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಕಲ್ಯಾಣ ಕರ್ನಾಟಕದಲ್ಲಿ ಕ್ರಿಕೆಟ್ ಕ್ರೀಡೆಗೆ ಪ್ರೋತ್ಸಾಹಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಕಲಬುರ್ಗಿ ಮತ್ತು ರಾಯಚೂರು ಜಿಲ್ಲೆಗಳನ್ನು ಪ್ರತ್ಯೇಕ ಕ್ರಿಕೆಟ್ ವಲಯಗಳನ್ನಾಗಿ ವಿಂಗಡಣೆ ಮಾಡುವ ಬಗ್ಗೆ ಬಹಳ ದಿನಗಳಿಂದ ಬೇಡಿಕೆ ಇದ್ದು, ಈ ಬಗ್ಗೆ ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಗೆ ಸರ್ಕಾರ ಸಲಹೆ ನೀಡುವುದೇ;	ಕಲ್ಯಾಣ ಕರ್ನಾಟಕ ಭಾಗದಲ್ಲಿ ನಿರ್ಮಾಣ ಮಾಡಲಾಗಿರುವ ಜಿಲ್ಲಾ ಕ್ರೀಡಾಂಗಣಗಳು ಹಾಗೂ ತಾಲ್ಲೂಕು ಕ್ರೀಡಾಂಗಣಗಳಲ್ಲಿ ಕ್ರಿಕೆಟ್ ಪಂದ್ಯಾವಳಿಗಳನ್ನು ಆಯೋಜಿಸಲು ಅವಕಾಶ ನೀಡಲಾಗುತ್ತಿದೆ. ಅಲ್ಲದೇ, ಕ್ರಿಕೆಟ್ ಕ್ರೀಡಾಪಟುಗಳಿಗೆ ಇಲಾಖೆಯ ಕ್ರೀಡಾ ವಿದ್ಯಾರ್ಥಿ ವೇತನ, ಶೈಕ್ಷಣಿಕ ಶುಲ್ಕ ಮರುಪಾವತಿ, ಸಾಧಕ ಕ್ರೀಡಾಪಟುಗಳಿಗೆ ನಗದು ಪುರಸ್ಕಾರ ಮತ್ತಿತರ ಕಾರ್ಯಕ್ರಮಗಳಲ್ಲಿ ಫಲಾನುಭವಿಗಳಾಗಲು ಅವಕಾಶ ಕಲ್ಪಿಸಲಾಗಿದೆ. ಸಾಧಕ ಕ್ರಿಕೆಟ್ ಕ್ರೀಡಾಪಟುಗಳನ್ನು / ತರಬೇತುದಾರರನ್ನು ನಿಯಮಾನುಸಾರ ಏಕಲವ್ಯ ಹಾಗೂ ಜೀವಮಾನ ಸಾಧನೆ ಪ್ರಶಸ್ತಿಗೆ ಪರಿಗಣಿಸಲಾಗುತ್ತಿದೆ. ಕಲಬುರ್ಗಿ ಮತ್ತು ರಾಯಚೂರು ಜಿಲ್ಲೆಗಳನ್ನು ಪ್ರತ್ಯೇಕ ಕ್ರಿಕೆಟ್ ವಲಯಗಳನ್ನಾಗಿ ಅಭಿವೃದ್ಧಿ ಪಡಿಸಲು KCSA ಗೆ ಕನಿಷ್ಠ 25 ಎಕರೆ ಭೂಮಿ ನೀಡಿದಲ್ಲಿ Stadium / activity ಅಭಿವೃದ್ಧಿಗೊಳಿಸಬಹುದಾಗಿದೆ.
ಆ)	ಉತ್ತರ ಕರ್ನಾಟಕಕ್ಕೆ ಪ್ರತ್ಯೇಕ ರಣಜಿ ತಂಡವನ್ನು ರಚನೆ ಮಾಡುವ ಬಗ್ಗೆ ಕ್ರಮ ತೆಗೆದುಕೊಳ್ಳುವಂತೆ ಕೆ.ಎಸ್.ಸಿ.ಎ. ಗೆ ಸರ್ಕಾರ ಸಲಹೆ ನೀಡುವುದೇ; ಮಹಾರಾಷ್ಟ್ರ, ವಿದರ್ಭಾ, ಮುಂಬಯಿ ಮತ್ತು ಹೈದ್ರಾಬಾದ್, ಆಂಧ್ರ ಪ್ರದೇಶ ಮತ್ತು ಗುಜರಾತ್ ಬರೋಡಾ ಈ ರೀತಿ ಒಂದು ರಾಜ್ಯಕ್ಕೆ ಎರಡು ಮೂರು ರಣಜಿ ತಂಡಗಳಿರುವಂತೆ ಕರ್ನಾಟಕದಲ್ಲೂ ಎರಡು ರಣಜಿ ತಂಡಗಳನ್ನು ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೇ;	ಉತ್ತರ ಕರ್ನಾಟಕಕ್ಕೆ ಪ್ರತ್ಯೇಕ ರಣಜಿ ತಂಡವನ್ನು ರಚನೆ ಮಾಡುವ ಯಾವುದೇ ಪ್ರಸ್ತಾವನೆ ಪ್ರಸ್ತುತ ಸರ್ಕಾರದ ಮುಂದಿರುವುದಿಲ್ಲ.
ಇ)	ಇದರಿಂದ ಹಿಂದುಳಿದ ಈ ಭಾಗದಲ್ಲಿ ನೂತನ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸಲು ಅವಕಾಶವಾಗುವುದರಿಂದ ಈ ಬಗ್ಗೆ ಸರ್ಕಾರ ಕೆ.ಎಸ್.ಸಿ.ಎ ಜೊತೆ ಮಾತುಕತೆ ನಡೆಸಿ ಸೂಕ್ತ ಕ್ರಮ ಜರುಗಿಸುವುದೇ ?	ಈ ಪ್ರಸ್ತಾವನೆಯ ಬಗ್ಗೆ KCSA ಜೊತೆಗೆ ಚರ್ಚಿಸಲಾಗುವುದು.

ವೈಎಸ್‌ಡಿ/ಇಬಿಬಿ/212/2021

(ಡಾ. ನಾರಾಯಣಗೌಡ)
ರೇಷ್ಮೆ, ಯುವ ಸಬಲೀಕರಣ ಮತ್ತು
ಕ್ರೀಡಾ ಸಚಿವರು